ಜಿಲ್ಲಾ ಪಂಚಾಯತ್ ಕಾರ್ಯಾಲಯ
08 FEB 2016
18302/2016

## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಇ-ಸ್ವತ್ತು ತಂತ್ರಾಂಶದಿಂದ ವಿನಾಯಿತಿ ನೀಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 (ಭಾ-6) ದಿನಾಂಕ:21-01-2014.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 (ಭಾ-6) ದಿನಾಂಕ:03-02-2014.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು 2006 ಕ್ಕೆ ತಿದ್ದುಪಡಿಯನ್ನು ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) (2ನೇ ತಿದ್ದುಪಡಿ) ನಿಯಮಗಳು 2013ನ್ನು ದಿನಾಂಕ:21-01-2014 ರಂದು ಹೊರಡಿಸಲಾಗಿದ್ದು, ಈ ತಿದ್ದುಪಡಿ ನಿಯಮಗಳನ್ವಯ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಕ್ರಮಬದ್ಧವಲ್ಲದ ಆಸ್ತಿಗಳ (ನಿವೇಶನ ಮತ್ತು ಕಟ್ಟಡಗಳಿಗೆ) ಸಂಬಂಧಿಸಿದ ತೆರಿಗೆ ನಿರ್ಧರಣಾ ಪಟ್ಟಿಯನ್ನು ನಮೂನೆ-11ಬಿ ಮೂಲಕ ನಿರ್ವಹಿಸಲು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧವಲ್ಲದ ಆಸ್ತಿಗಳಿಗೆ ತೆರಿಗೆ ನಿರ್ಧರಣೆ ಪಟ್ಟಿಯನ್ನು ನಮೂನೆ-11ಬಿ ಮೂಲಕ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯ ಮೂಲಕ ವಿತರಿಸುವ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ.

ಆದರೆ ತಿದ್ದುಪಡಿ ನಿಯಮಗಳು ಜಾರಿಗೆ ಬಂದ ನಂತರ ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಕೆಲವು ತೊಂದರೆಗಳು, ಸಮಸ್ಯೆಗಳು ಮತ್ತು ಗೊಂದಲಗಳಿರುವ ಬಗ್ಗೆ ಸರ್ಕಾರಕ್ಕೆ ಮನವಿಗಳು ಬಂದಿರುವುದನ್ನು ಸರ್ಕಾರ ಪರಿಗಣಿಸಿದೆ.

ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 266 ಗ್ರಾಪಂಅ 2015 (ಭಾಗ)**
**ಬೆಂಗಳೂರು, ದಿನಾಂಕ: 13-01-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕ ಪತ್ರಗಳು) ನಿಯಮಗಳು, 2006 ರ ನಿಯಮ 30 ರಿಂದ ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಇ-ಸ್ವತ್ತು

ತಂತ್ರಾಂಶದಿಂದ ತಾತ್ಕಾಲಿಕವಾಗಿ ಮತ್ತು ಮುಂದಿನ ಆದೇಶದವರೆಗೆ ವಿನಾಯಿತಿ ನೀಡಲು ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿ. ಬಲರಾಮ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರಭಾರ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,

ಗೆ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿಗಳು, ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳು,
2) ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3) ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ., ಬೆಂಗಳೂರು
2) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.